ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ: ಆರ್.ಟಿ.ಇ.ಪ್ರ.ಪ್ರ.17-18/01 /2016-17. ದಿನಾಂಕ:14.03.2017

**: : ಸುತ್ತೋಲೆ: :**

ವಿಷಯ: 2017-18 ನೇ ಸಾಲಿನಲ್ಲಿ ಶಿಕ್ಷಣ ಹಕ್ಕು ಕಾಯಿದೆಯಡಿ ಪ್ರವೇಶ ಪಡೆಯಲು ಕೈಬಿಟ್ಟು ಹೋಗಿರುವ ಜನವಸತಿ ಪ್ರದೇಶಗಳನ್ನು ತಂತ್ರಾಂಶದಲ್ಲಿ ಸೇರ್ಪಡೆ ಮಾಡುವ ಬಗ್ಗೆ.

**********

2017-18 ನೇ ಸಾಲಿನಲ್ಲಿ ಶಿಕ್ಷಣ ಹಕ್ಕು ಕಾಯಿದೆಯಡಿ ಪ್ರವೇಶ ಕೋರಿ ಅರ್ಜಿ ಸಲ್ಲಿಸಲು ಆಧಾರ್ ಕಾರ್ಡ್ ಆಧಾರಿತ ಜನವಸತಿ ಪ್ರದೇಶಗಳನ್ನು ಮಾತ್ರ ಪರಿಗಣಿಸುವಂತೆ ತಂತ್ರಾಂಶ ಅಭಿವೃದ್ಧಿಪಡಿಸಲಾಗಿದೆ. ಕೆಲವು ಜನವಸತಿ ಪ್ರದೇಶಗಳು ಕೈಬಿಟ್ಟು ಹೋಗಿರುವುದರಿಂದ ಅರ್ಜಿ ಸಲ್ಲಿಸಲು ಸಾಧ್ಯವಾಗುತ್ತಿಲ್ಲ ಎಂದು ಹಲವಾರು ದೂರುಗಳು ಬರುತ್ತಿವೆ. ಈ ಹಿನ್ನೆಲೆಯಲ್ಲಿ ದಿನಾಂಕ: 07.03.2017 ರಂದು ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ಅಂಚೆ ಇಲಾಖೆಯ ಪಿನ್‌ಕೋಡ್ ಆಧಾರಿತ ಜನವಸತಿ ಪ್ರದೇಶಗಳನ್ನು ಸಂಬಂಧಿಸಿದ ಜನವಸತಿ ಪ್ರದೇಶ, ಯಾವ ವಾರ್ಡ್ ಅಥವಾ ಕಂದಾಯ ಗ್ರಾಮಕ್ಕೆ ಸೇರುತ್ತದೆ ಎಂಬುದನ್ನು ನಮೂದಿಸಿ ಇ-ಮೇಲ್ ಮೂಲಕ ಕಳುಹಿಸಿಕೊಡಲು ತಿಳಿಸಲಾಗಿತ್ತು. ಆದಾಗ್ಯೂ ಕೆಲವು ಜಿಲ್ಲೆಗಳಿಂದ ಸಮರ್ಪಕ ಮಾಹಿತಿ ಬಂದಿರುವುದಿಲ್ಲ.

ಆರ್.ಟಿ.ಇ ಅಡಿ ಅರ್ಜಿ ಸಲ್ಲಿಸ ಬಯಸುವ ಪೋಷಕರಿಗೆ ತೊಂದರೆಯಾಗದಂತೆ ಕೈಬಿಟ್ಟು ಹೋಗಿರುವ ಜನವಸತಿ ಪ್ರದೇಶಗಳನ್ನು ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಲು ದಿನಾಂಕ: 15.03.2017 ಮತ್ತು ದಿನಾಂಕ: 16.03.2017 ವರೆಗೆ ಸಂಜೆ 6:00 ರಿಂದ ಬೆಳಿಗ್ಗೆ: 7:00 ಗಂಟೆಗೆವರೆಗೆ ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅವಕಾಶ ಮಾಡಿಕೊಡಲಾಗಿದೆ. ಕೆಳಕಾಣಿಸಿದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

1. ಕೈಬಿಟ್ಟು ಹೋಗಿರುವ ಜನವಸತಿ ಪ್ರದೇಶಗಳನ್ನು ಸಂಬಂಧಿಸಿದ ವಾರ್ಡ್ ಅಥವಾ ಕಂದಾಯ ಗ್ರಾಮಕ್ಕೆ ಹೊಸದಾಗಿ ಸೇರ್ಪಡೆ ಮಾಡುವುದು.
2. ನಗರ ಪ್ರದೇಶದಲ್ಲಿ ಕೇವಲ ವಾರ್ಡ್ ಹೆಸರು ಮತ್ತು ಸಂಖ್ಯೆ ನಮೂದಿಸುವ ಬದಲು ಆ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಜನವಸತಿ ಪ್ರದೇಶಗಳನ್ನು ಸೇರ್ಪಡೆ ಮಾಡುವುದು.
3. ಗ್ರಾಮೀಣ ಪ್ರದೇಶದಲ್ಲಿ ಸಂಬಂಧಿಸಿದ ಕಂದಾಯ ಗ್ರಾಮದ ವ್ಯಾಪ್ತಿಗೆ ಒಳಪಡುವ ಎಲ್ಲಾ ಜನವಸತಿ ಪ್ರದೇಶಗಳನ್ನು ಸೇರ್ಪಡೆ ಮಾಡುವುದು.
4. ಹಾಲಿ ಇರುವ ಜನವಸತಿ ಪ್ರದೇಶವನ್ನು ತೆಗೆದು ಹಾಕಬಾರದು.
5. ಬೆಂಗಳೂರು ಉತ್ತರ ಮತ್ತು ದಕ್ಷಿಣ ಜಿಲ್ಲಾ ಉಪನಿರ್ದೇಶಕರುಗಳನ್ನು ಹೊರತುಪಡಿಸಿ ಇತರೆ ಜಿಲ್ಲೆಗಳ ಉಪನಿರ್ದೇಶಕರು ಪಿನ್‌ಕೋಡ್‌ಗೆ ಸಂಬಂಧಿಸಿದ ಸಮಸ್ಯೆಗಳನ್ನು ಸ್ಥಳೀಯ ಅಂಚೆ ಇಲಾಖೆಯೊಂದಿಗೆ ಸಮಾಲೋಚಿಸಿ ಹಾಲಿ ಇರುವ ಪಿನ್‌ಕೋಡ್ ಸಂಖ್ಯೆಯ ಜೊತೆಗೆ ಸೂಕ್ತ ಪಿನ್‌ಕೋಡ್ ಸಂಖ್ಯೆ ಅಪ್‌ಲೋಡ್ ಮಾಡುವುದು.

6. ಬೆಂಗಳೂರು ಉತ್ತರ ಮತ್ತು ದಕ್ಷಿಣ ಜಿಲ್ಲಾ ಉಪನಿರ್ದೇಶಕರುಗಳು ಪಿನ್‌ಕೋಡ್‌ಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಲಿಖಿತ ವಿವರಣೆಯೊಂದಿಗೆ ಖುದ್ದಾಗಿ ಆಯುಕ್ತರ ಕಛೇರಿಗೆ ಭೇಟಿ ನೀಡಿ ಸಮಸ್ಯೆ ಪರಿಹರಿಸಿಕೊಳ್ಳುವುದು.
7. ಶಾಲಾ ಜೋಡಣೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಮಜಾಯಿಷಿ ಪಡೆದು ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) / ನೋಡಲ್ ಅಧಿಕಾರಿಗಳು ದಾಖಲೆಗಳೊಂದಿಗೆ ಆಯುಕ್ತರ ಕಾರ್ಯಾಲಯಕ್ಕೆ ಭೇಟಿ ನೀಡಿ ಸಮಸ್ಯೆ ಪರಿಹರಿಸಿಕೊಳ್ಳುವುದು.
8. ಜನವಸತಿ ಪ್ರದೇಶಗಳ ಸೇರ್ಪಡೆ ಮಾಡಲು ಅವಕಾಶ ನೀಡಲಾಗಿದೆ. ಇದನ್ನು ಹೊರತುಪಡಿಸಿದ ಯಾವುದೇ ತಿದ್ದುಪಡಿಗಳನ್ನು ತಂತ್ರಾಂಶದಲ್ಲಿ ಮಾಡಬೇಕಾಗಿದ್ದು, ಅವಶ್ಯವೆನಿಸಿದರೆ ಸೂಕ್ತ ಸಮಜಾಯಿಷಿ ಹಾಗೂ ಸಮರ್ಥನೆಯೊಂದಿಗೆ ಉಪನಿರ್ದೇಶಕರು(ಆಡಳಿತ) ರವರು ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಪ್ರಸ್ತಾವನೆ ಪಡೆದು ಕ್ರೋಢೀಕರಿಸಿ ತುರ್ತಾಗಿ ಸಲ್ಲಿಸುವುದು.

2017-18 ನೇ ಸಾಲಿನಲ್ಲಿ ಆರ್.ಟಿ.ಇ ಅಡಿ ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದಂತೆ ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲ್ಕಾಣಿಸಿದ ಎಲ್ಲಾ ಸೂಚನೆಗಳನ್ನು ಅನುಪಾಲಿಸುವುದು. ಅಲ್ಲದೇ ಅವರ ಆಡಳಿತ ವ್ಯಾಪ್ತಿಯ ಎಲ್ಲಾ ಜನವಸತಿ ಪ್ರದೇಶಗಳು ಸೇರ್ಪಡೆಯಾಗಿರುವ ಬಗ್ಗೆ ಲಿಖಿತ ದೃಢೀಕರಣವನ್ನು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ದಿನಾಂಕ: 17.03.2017 ರೊಳಗೆ ಸಲ್ಲಿಸಲು ತಿಳಿಸಿದೆ.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ.

ರವರಿಗೆ,
1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ .
3. ಕಛೇರಿ ಪ್ರತಿ.